# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಪ್ರಶ್ನೆಯ ವಿಧ | ಚುಕ್ಕೆ ಗುರುತಿಲ್ಲದ |
| ಪ್ರಶ್ನೆ ಸಂಖ್ಯೆ | 302 (347) (ಆರ್ಥಿಕ ಇಲಾಖೆಯಿಂದ ವರ್ಗಾವಣೆಗೊಂಡ ಪ್ರಶ್ನೆ) |
| ಉತ್ತರಿಸಬೇಕಾದ ದಿನಾಂಕ: | 29-01-2026 |
| ವಿಷಯ | ಅತಿಥಿ ಉಪನ್ಯಾಸಕರ ವೇತನ ಹೆಚ್ಚಳ |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ವೇತನವು ತುಂಬಾ ಕಡಿಮೆ ಇದ್ದು, ಇದನ್ನು ಹೆಚ್ಚಳ ಮಾಡುವ ಬಗ್ಗೆ ಸರ್ಕಾರ 2026-27ನೇ ಸಾಲಿನ ಆಯ-ವ್ಯಯದಲ್ಲಿ ಕ್ರಮ ವಹಿಸುವುದೇ; | ಅತಿಥಿ ಉಪನ್ಯಾಸಕರ ಮಾಸಿಕ ಗೌರವಧನ ಹೆಚ್ಚಳ ಸಂಬಂಧ ಸರ್ಕಾರದ ಆದೇಶ ಸಂಖ್ಯೆ: ಇಪಿ 137 ಎಸ್‌ಇಎಸ್ 2025, ದಿನಾಂಕ: 15-05-2025 ರಲ್ಲಿ ರೂ. 12,000/- ಗಳ ಗೌರವ ಸಂಭಾವನೆಯನ್ನು ರೂ. 14,000/- ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಲಾಗಿರುತ್ತದೆ. ಸದರಿ ಆದೇಶದಂತೆ ಗೌರವಧನವನ್ನು ಪಾವತಿ ಮಾಡಲಾಗುತ್ತಿರುವುದರಿಂದ ಹೆಚ್ಚಳ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಆ) | ರಾಜ್ಯದ ಹಲವಾರು ಅತಿಥಿ ಉಪನ್ಯಾಸಕರು ಹಲವು ಬಾರಿ ಈ ನಿಟ್ಟಿನಲ್ಲಿ ಹೋರಾಟವನ್ನು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ; | ಬಂದಿದೆ<br><br>ಪ್ರಸ್ತುತ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ರೂ. 12,000/- ಗಳ ಗೌರವ ಸಂಭಾವನೆಯನ್ನು ರೂ. 14,000/- ಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಇಪಿ 137 ಎಸ್ ಇಎಸ್ 2025 ದಿನಾಂಕ: 15-05-2025 ರಲ್ಲಿ ಹೆಚ್ಚಿಸಿ ಆದೇಶ ಹೊರಡಿಸಲಾಗಿರುವ ಹಿನ್ನಲೆಯಲ್ಲಿ ರೂ. 30,000/- ಗಳಿಗೆ ಹೆಚ್ಚಿಸುವುದು ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಇ) | ಅತಿಥಿ ಉಪನ್ಯಾಸಕರು ತಿಂಗಳಿಗೆ ಕನಿಷ್ಠ ರೂ. 30,000/- ವೇತನ ನೀಡುವಂತೆ ಮನವಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ; ಈ ನಿಟ್ಟಿನಲ್ಲಿ ಸರ್ಕಾರದ ನಿಲುವೇನು; | |

| | | |
|---|---|---|
| ಈ) | ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ವರ್ಷದಲ್ಲಿ 10 ತಿಂಗಳ ವೇತನ ನೀಡುತ್ತಿದ್ದು, ಇದನ್ನು 2026-27ನೇ ಸಾಲಿನಿಂದ ವರ್ಷ ಪೂರ್ತಿ (12 ತಿಂಗಳು) ನೀಡಲು ಕ್ರಮ ವಹಿಸಲಾಗುವುದೇ; ಇಲ್ಲವಾದಲ್ಲಿ 2 ತಿಂಗಳ 'ದೈನಂದಿನ ಖರ್ಚು ವೆಚ್ಚಗಳಿಗೆ ಪರ್ಯಾಯ ಮಾರ್ಗ ಏನು? | ರಾಜ್ಯದಲ್ಲಿ ಪ್ರಸ್ತುತ ತಾತ್ಕಾಲಿಕವಾಗಿ ನೇಮಕಗೊಳ್ಳುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಅತಿಥಿ ಉಪನ್ಯಾಸಕರಿಗೆ ರೂ. 14,000/-ಗಳ ಗೌರವಧನವನ್ನು ನೀಡಲಾಗುತ್ತಿದ್ದು, ಆಯಾ ಶೈಕ್ಷಣಿಕ ವರ್ಷದ 10 ತಿಂಗಳ ಅವಧಿಗೆ ಅಂದರೆ ಜೂನ್ ಮಾಹೆಯಿಂದ ಮಾರ್ಚ್ ಮಾಹೆಯವರೆಗೆ ಗೌರವಧನವನ್ನು ಬಿಡುಗಡೆ ಮಾಡಲಾಗುತ್ತಿದೆ.<br><br>ಅತಿಥಿ ಉಪನ್ಯಾಸಕರ ಸೇವೆಯನ್ನು ತಾತ್ಕಾಲಿಕವಾಗಿ ಆಯಾ ಶೈಕ್ಷಣಿಕ ವರ್ಷದ 10 ತಿಂಗಳ ಅವಧಿಗೆ ಮಾತ್ರ ಬಳಸಿಕೊಳ್ಳಲಾಗುತ್ತಿರುವ ಕಾರಣ 12 ತಿಂಗಳು ಗೌರವಧನ ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |

**ಸಂಖ್ಯೆ**: ಇಪಿ 41 ಡಿಜಿಡಬ್ಲ್ಯೂ 2026

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು